ಕೋರಿ ಪ್ರಸ್ತಾವನೆ ಸಲ್ಲಿಸಲಾಗಿದೆ. ಬಾಗೇಪಲ್ಲಿಯಲ್ಲಿ ಪ್ರಾಚಾರ್ಯರ ಹುದ್ದೆಯೂ ಸೇರಿದಂತೆ ಒಟ್ಟು 11 ಹುದ್ದೆಗಳು ಮಂಜೂರಾಗಿದ್ದು, 7 ಹುದ್ದೆಗಳನ್ನು ಭರ್ತಿ ಮಾಡಲಾಗಿದ್ದು ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ತೆಗೆದುಕೊಳ್ಳಲಾಗಿರುತ್ತದೆ. ಗುಡಿಬಂಡೆ ಸರ್ವೆ ನಂ. 145 ಮತ್ತು 142 ರಲ್ಲಿ ಒಟ್ಟು 3.19 ಎಕರೆ ಭೂಮಿಯನ್ನು ಗುರುತಿಸಿದ್ದು, ಸ್ವಾಧೀನ ಪಡಿಸಿಕೊಳ್ಳುವ ಪ್ರಕ್ರಿಯೆ ಜಾರಿಯಲ್ಲಿದೆ. ಗುಡಿಬಂಡೆ ಐಟಿಐ 2008–09ನೇ ಸಾಲಿನಲ್ಲಿ ಪ್ರಾರಂಭವಾಗಿದ್ದು ಹುದ್ದೆಗಳ ಸೃಜನೆಗೆ ಕ್ರಮ ತೆಗೆದುಕೊಳ್ಳಲಾಗುತ್ತಿದೆ. ಇಲಾಖೆಯಲ್ಲಿ ಹಾಲಿ ಲಭ್ಯವಿರುವ ಸಿಬ್ಬಂದಿಯನ್ನು ನಿಯೋಜಿಸಿ ಹಾಗೂ ಅತಿಥಿ ಬೋಧಕರನ್ನು ನೇಮಕ ಮಾಡಿಕೊಂಡು ವಿದ್ಯಾರ್ಥಿಗಳಿಗೆ ತರಬೇತಿ ನೀಡಲು ವ್ಯವಸ್ಥೆ ಮಾಡಲಾಗಿದೆ.

ಅನುಬಂಧ-III

ದಿನಾಂಕ: 11–01–2011 ರ ಚುಕ್ಕೆ ಗುರುತಿನ ಪ್ರಶ್ನೋತ್ತರ

ಶ್ರೀರಂಗಪಟ್ಟಣ ವಿಧಾನಸಭಾ ಕ್ಷೇತ್ರದಲ್ಲಿ ಕನ್ನಡ ಗಂಗಾ ಯೋಜನೆಯಡಿ ಸರ್ಕಾರಿಂದ ಬಿಡುಗಡೆಯಾಗಿರುವ ಅನುದಾನದ ಬಗ್ಗೆ

14(42): ಶ್ರೀ ರಮೇಶ್ ಬಂದಿಸಿದ್ದೇಗೌಡ ಎ.ಬಿ. (ಶ್ರೀರಂಗಪಟ್ಟಣ): ಮಾನ್ಯ ನಗರಾಭಿವೃದ್ಧಿ ಕಾನೂನು ಹಾಗೂ ಸಂಸದೀಯ ವ್ಯವಹಾರಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಮಂಡ್ಯ ಜಿಲ್ಲೆಯ ಶ್ರೀರಂಗಪಟ್ಟಣ ವಿಧಾನಸಭಾ ಕ್ಷೇತ್ರದಲ್ಲಿ ಕನ್ನಡ ಗಂಗಾ ಯೋಜನೆಯಡಿಯಲ್ಲಿ ಕುಡಿಯುವ ನೀರು ಶುದ್ಧೀಕರಣ ಯೋಜನೆಗೆ ಸರ್ಕಾರದಿಂದ ಬಿಡುಗಡೆಯಾಗಿರುವ ಅನುದಾನವೆಷ್ಟು?

ಆ) ಈ ಯೋಜನೆ ಎಂದಿನಿಂದ ಪ್ರಾರಂಭವಾಯಿತು ಹಾಗೂ ಯಾವಾಗ ಮುಕ್ತಾಯವಾಗುತ್ತದೆ? (ವಿವರಗಳನ್ನು ಒದಗಿಸುವುದು);

ಇ) ಕನ್ನಡ ಗಂಗಾ ಯೋಜನೆಯಡಿ ಎಷ್ಟು ನೀರು ಶುದ್ಧೀಕರಣ ಉಪಕರಣಗಳನ್ನು ಖರೀದಿಸಲಾಗಿದೆ? (ಸಂಪೂರ್ಣ ವಿವರಗಳನ್ನು ಒದಗಿಸುವುದು);

ಶ್ರೀ ಎಸ್. ಸುರೇಶ್ ಕುಮಾರ್ (ನಗರಾಭಿವೃದ್ಧಿ, ಕಾನೂನು ಹಾಗೂ ಸಂಸದೀಯ ವ್ಯವಹಾರಗಳ ಸಚಿವರು):

ಅ) ಯಾವುದೇ ಅನುದಾನ ಬಿಡುಗಡೆಯಾಗಿರುವುದಿಲ್ಲ

ಆ) ಸದರಿ ಯೋಜನೆಯ ವಿವರವಾದ ವಿನ್ಯಾಸ ಹಾಗೂ ವರದಿ (DPR) ತಯಾರಿಸಲು ಕ್ರಮ ಕೈಗೊಳ್ಳಲಾಗಿದೆ. ಯೋಜನೆಗೆ ಅನುಮೋದನೆ ದೊರೆತ ನಂತರ ಅನುಷ್ಠಾನಗೊಳಿಸಲಾಗುವುದು

ಇ) ಯಾವುದೇ ನೀರು ಶುದ್ಧೀಕರಣ ಉಪಕರಣಗಳನ್ನು ಖರೀದಿಸಲಾಗಿಲ್ಲ.

ಸಿಂಧನೂರು ನಗರಸಭೆಗೆ ಯು.ಜೆ.ಡಿ. ಯೋಜನೆಯಡಿ ಮಂಜೂರಾಗಿರುವ ಅನುದಾನದ ಬಗ್ಗೆ

15(163): ಶ್ರೀ ನಾಡಗೌಡ ವೆಂಕಟರಾವ್ (ಸಿಂಧನೂರು): ಮಾನ್ಯ ನಗರಾಭಿವೃದ್ಧಿ, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ, ಪೌರಾಡಳಿತ ಮತ್ತು ಸ್ಥಳೀಯ ಸಂಸ್ಥೆಗಳು ಹಾಗೂ ಬೆಂಗಳೂರು ಜಲಮಂಡಳಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಸಿಂಧನೂರು ನಗರಸಭೆ ಯುಜಿಡಿ ಕಾಮಗಾರಿಗಾಗಿ ಸರ್ಕಾರದಿಂದ ಈ ವರೆವಿಗೂ ಬಿಡುಗಡೆಯಾಗಿರುವ ಅನುದಾನದ ಮೊತ್ತ ಎಷ್ಟು?

ಆ) ಸಿಂಧನೂರು ನಗರ ಸಭೆಯಲ್ಲಿ ಯು.ಜಿ.ಡಿ. ಯೋಜನೆಯಡಿ ಯಾವ ಯಾವ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ (ವಿವರಗಳನ್ನು ನೀಡುವುದು);

ಇ) ಯು.ಜಿ.ಡಿ. ಯೋಜನೆಯ ಕಾಮಗಾರಿಗಳ ವಿಳಂಬಕ್ಕೆ ಕಾರಣಗಳೇನು?

ಈ) ಈ ಕಾಮಗಾರಿಗಳ ವಿಳಂಬದಿಂದ ಸಾರ್ವಜನಿಕರಿಗೆ ತೊಂದರೆ ಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಉ) ಹಾಗಿದ್ದಲ್ಲಿ, ತ್ವರಿತವಾಗಿ ಕಾಮಗಾರಿಗಳನ್ನು ಪೂರ್ಣಗೊಳಿಸಲು ಸರ್ಕಾರಕ್ಕಿರುವ ತೊಂದರೆಗಳೇನು?

ಊ) ಈ ಕಾಮಗಾರಿಗಳನ್ನು ಪೂರ್ಣಗೊಳಿಸಲು ಸರ್ಕಾರ ಕಾಲಮಿತಿಯನ್ನೇನಾದರೂ ವಿಧಿಸಿದಿಯೇ?

ಋ) ಹಾಗಿದ್ದಲ್ಲಿ ಈ ಕಾಮಗಾರಿಗಳನ್ನು ಎಂದು ಪೂರ್ಣಗೊಳಿಸ ಲಾಗುವುದು?